# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 1110 (1100) |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : | 21.08.2025 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಕಾಮಗಾರಿಯು ಯಾವ ಹಂತದಲ್ಲಿದೆ; | ಇಲಾಖೆಯಿಂದ ಮಂಜೂರಾದ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಸೆಂಟರ್ ನಿರ್ಮಾಣ (ವಾಚ್ ಟವರ್ ಕಮ್ ವಾಟರ್ ಟ್ಯಾಂಕ್, ಬಯಲು ರಂಗಮಂದಿರ , ಅಡಿಗೆಮನೆ, ಅಂಗಡಿ ಮಳಿಗೆ, ದೊಡ್ಡ ಹಾಲ್, ಲೈಬ್ರರಿ ಕೊಠಡಿ, ಪಾರ್ಕಿಂಗ್ ಡಿಸ್ ಪ್ಲೇ ಏರಿಯಾ ಇತ್ಯಾದಿ ಸೌಲಭ್ಯಗಳ ಅಭಿವೃದ್ಧಿ) ಅಭಿವೃದ್ಧಿ ಕಾಮಗಾರಿಯು ಪೂರ್ಣಗೊಂಡಿರುತ್ತದೆ. |
| ಆ) | ಈ ಹೆರಿಟೇಜ್ ಕೇಂದ್ರದ ಕಾಮಗಾರಿಗೆ ಒಟ್ಟು ಮೀಸಲಿರಿಸಿದ ಅನುದಾನ ಎಷ್ಟು; ಸದರಿ ಕಾಮಗಾರಿ ವಿಳಂಬವಾಗಲು ಕಾರಣವೇನು; | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಕಾಮಗಾರಿಯನ್ನು 2013-14ನೇ ಸಾಲಿನಲ್ಲಿ ರೂ.268.04 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಪ್ರಾರಂಭಿಸಲಾಗಿತ್ತು. ತದನಂತರ, ಸದರಿ ಕಾಮಗಾರಿಯನ್ನು ದಿನಾಂಕ:27-05-2020 ರ ಆದೇಶದಲ್ಲಿ ರೂ.330.45 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಪರಿಷ್ಕೃತ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ |
| ಇ) | ಸದರಿ ಕಾಮಗಾರಿಗಳನ್ನು ಸಿಎಸ್‌ಆರ್ ಅನುದಾನದಡಿಯಲ್ಲಿ ಕೈಗೊಳ್ಳುವಂತೆ ಮತ್ತು ನಿರ್ವಹಣೆಯನ್ನು ಪಿಪಿಪಿ ಮಾದರಿಯಲ್ಲಿ ಪೂರ್ಣಗೊಳಿಸಲು ನಿರ್ದೇಶಕರು ಪ್ರವಾಸೋದ್ಯಮ ಇಲಾಖೆ ಇವರು ಜಿಲ್ಲಾಧಿಕಾರಿಗಳಿಗೆ ನೀಡಿರುವ ಪ್ರಸ್ತಾವನೆ ಯಾವ ಹಂತದಲ್ಲಿದೆ; | ಮಾನ್ಯ ಶಾಸಕರು ಹಾಗೂ ಮಾಜಿ ಸಚಿವರು ಮಡಿಕೇರಿ ವಿಧಾನ ಸಭಾ ಕ್ಷೇತ್ರ, ಕೊಡಗು ಜಿಲ್ಲೆ ಇವರ ಪತ್ರ ದಿನಾಂಕ:01.09.2022 ರಂದು ಹಾಗೂ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ಕೊಡಗು ಜಿಲ್ಲೆ, ಮಡಿಕೇರಿ ಇವರ ಪತ್ರ ದಿನಾಂಕ:26.08.2022ರಂದು ಕೊಡಗು ಜಿಲ್ಲೆ ಹೆಮ್ಮೆಯ ಸಾಂಸ್ಕೃತಿಕ ತಾಣವಾಗಿ ಹೆರಿಟೇಜ್ ಸೆಂಟರ್ ರೂಪುಗೊಳ್ಳುವಂತಾಗಲು ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.<br><br>ಮುಂದುವರೆದು, ಸದರಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ದಿನಾಂಕ:13-02-2023ರ ಪತ್ರದಲ್ಲಿ ಕೊಡವ ಹೆರಿಟೇಜ್ ಸೆಂಟರ್ ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭ ಮಾಡಲು ಆಗಬೇಕಾಗಿರುವ ಪೂರಕ ಕಾಮಗಾರಿಗಳಿಗೆ ಅಗತ್ಯವಿರುವ ಹೆಚ್ಚುವರಿ ಅನುದಾನ ರೂ.495.00 ಲಕ್ಷಗಳನ್ನು ಮಂಜೂರು |

| | | |
|---|---|---|
| | | ಮಾಡಲು ಆರ್ಥಿಕ ಸಹಮತಿ ನೀಡದೇ ಇರುವುದರಿಂದ ಸದರಿ ಕಾಮಗಾರಿಗಳನ್ನು ಸಿಎಸ್‌ಆರ್ ಅನುದಾನದಡಿಯಲ್ಲಿ ಕೈಗೊಳ್ಳುವಂತೆ ತಿಳಿಸಲಾಗಿರುತ್ತದೆ.<br><br>ಅದರಂತೆ, ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಕೊಡಗು ಜಿಲ್ಲೆ, ಮಡಿಕೇರಿ ಇವರು ದಿನಾಂಕ: 04-03-2025ರ ಪತ್ರದಲ್ಲಿ ಸದರಿ ಕಾಮಗಾರಿಯನ್ನು ಸಿಎಸ್‌ಆರ್ ಅನುದಾನದಲ್ಲಿ ಕೈಗೊಂಡು ನಿರ್ವಹಣೆ ಮತ್ತು ಕಾರ್ಯಾಚರಣೆ ಮಾಡಲು ಕಷ್ಟಸಾಧ್ಯ/ ಕಾರ್ಯಸಾಧುವಲ್ಲದ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯನ್ನು ಪಿಪಿಪಿ (Public Private Partnership) ಮಾದರಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ನಿರ್ವಹಣೆ ಹಾಗೂ ಕಾರ್ಯಚರಣೆ ಮಾಡುವ ಬಗ್ಗೆ ಮಾರ್ಗದರ್ಶನ ನೀಡಲು ಕೋರಿ ಆಯುಕ್ತರು, ಪ್ರವಾಸೋದ್ಯಮ ಇಲಾಖೆ ಇವರಿಗೆ ಪ್ರಸ್ತಾವನೆ ಸಲ್ಲಿಸಿದ್ದು, ಪರಿಶೀಲನೆಯಲ್ಲಿದೆ. |
| ಈ) | 2025-2026ನೇ ಸಾಲಿನ ಆಯವ್ಯಯದಲ್ಲಿ ರಾಜ್ಯದ ಆಯ್ದ 10 ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲು 50 ಕೋಟಿ ರೂ. ಅನುದಾನವನ್ನು ಘೋಷಿಸಲಾಗಿದ್ದು, ಈ ಪೈಕಿ ಕೊಡಗು ಜಿಲ್ಲೆಯೂ ಒಳಗೊಂಡಿದ್ದು, ಯಾವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಅನುದಾನ ಮಂಜೂರು ಮಾಡಲಾಗಿದೆ? | 2025-26 ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಘೋಷಣೆಯಲ್ಲಿ ರಾಜ್ಯದ ಆಯ್ದ 10 ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವುದು ಎಂದು ಘೋಷಿಸಲಾಗಿದ್ದು, ಈ ಪೈಕಿ ಕೊಡಗು ಜಿಲ್ಲೆಯ ಕೊಡವ ಹೆರಿಟೇಜ್ ಕೇಂದ್ರವನ್ನು ಅಂದಾಜು ಮೊತ್ತ ರೂ.5.00 ಕೋಟಿಗಳಲ್ಲಿ ಅಭಿವೃದ್ಧಿಪಡಿಸುವ ಬಗ್ಗೆ ಪರಿಶೀಲನೆಯಲ್ಲಿದೆ. |

**ಸಂಖ್ಯೆ:ಟಿಒಆರ್ 182 ಟಿಡಿವಿ 2025**

**(ಎಚ್.ಕೆ.ಪಾಟೀಲ್)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು